# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | | 1088 |
| ಸದಸ್ಯರ ಹೆಸರು | | ಶ್ರೀ ಶರಣಪ್ಪ ಮಟ್ಟೂರ (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | | 20-12-2018 |
| ಉತ್ತರಿಸಬೇಕಾದ ಸಚಿವರು | | ಉನ್ನತ ಶಿಕ್ಷಣ ಸಚಿವರು |
| ಪ್ರಶ್ನೆ | | ಉತ್ತರ |
| ಅ) | ರಾಜ್ಯದ ಪ್ರಥಮ ದರ್ಜೆ ಕಾಲೇಜುಗಳಲ್ಲಿ 15 ವರ್ಷ ಮೇಲ್ಪಟ್ಟು ಕಾರ್ಯನಿರ್ವಹಿಸುತ್ತಿರುವ ಸಹ ಪ್ರಾಧ್ಯಾಪಕರುಗಳಿಗೆ ಪ್ರಾಧ್ಯಾಪಕರೆಂದು ಬಡ್ತಿ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದಲ್ಲಿ, ನೀಡದಿರಲು ಕಾರಣವೇನು; (ವಿವರ ನೀಡುವುದು) | ಬಂದಿದೆ.<br>ಸಹ ಪ್ರಾಧ್ಯಾಪಕರ ಹುದ್ದೆಯಿಂದ ಪ್ರಾಧ್ಯಾಪಕರ (ಪ್ರೊಫೇಸರ್) ಹುದ್ದೆಗೆ ವೃತ್ತಿ ಪದೋನ್ನತಿ ನೀಡಲು ಕ್ರಮ ಜರುಗಿಸಲಾಗುತ್ತಿದೆ. |
| ಆ) | ಪ್ರಾಧ್ಯಾಪಕರಾಗಿ ಬಡ್ತಿ ಹೊಂದಲು ವಿಶ್ವವಿದ್ಯಾಲಯ ಧನ ಸಹಾಯ ಆಯೋಗದ (ಯುಜಿಸಿ) ಪ್ರಕಾರ ಅರ್ಹತೆ ಹೊಂದಿದ್ದರೂ ಅಕಾಡೆಮಿಕ್ ಗ್ರೇಡ್ ಪೇ (ಎಜಿಪಿ) ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಬಂದಿದ್ದಲ್ಲಿ ಯಾವಾಗ ನೀಡಲಾಗುವುದು; | ಬಂದಿದೆ.<br>ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿನ ಸಹ ಪ್ರಾಧ್ಯಾಪಕರ ಒಟ್ಟು ಹುದ್ದೆಗಳ ಪೈಕಿ ಶೇ.10ರಷ್ಟು ಹುದ್ದೆಗಳನ್ನು ಪ್ರಾಧ್ಯಾಪಕರ ಹುದ್ದೆಗಳೆಂದು ಗುರುತಿಸಿ, ಅದರಲ್ಲಿ ಶೇಕಡ 75 ರಷ್ಟು ಹುದ್ದೆಗಳನ್ನು ಸಿ.ಎ.ಎಸ್.ಅಡಿಯಲ್ಲಿ ಪದೋನ್ನತಿ ನೀಡುವ ಮೂಲಕ ಭರ್ತಿ ಮಾಡಲು ದಿನಾಂಕ:13.03.2018 ರ ಸಂಖ್ಯೆ: ಇಡಿ 418 ಡಿಸಿಇ 2013 ರ ಸರ್ಕಾರಿ ಆದೇಶದಲ್ಲಿ ಕಾಲೇಜು ಶಿಕ್ಷಣ ಆಯುಕ್ತರ ಅಧ್ಯಕ್ಷತೆಯಲ್ಲಿ ಆಯ್ಕೆ ಸಮಿತಿಯನ್ನು ರಚಿಸಿದ್ದು, ಈ ಸಂಬಂಧ ಸಹ ಪ್ರಾಧ್ಯಾಪಕರ ಹುದ್ದೆಯಲ್ಲಿ 03 ವರ್ಷಗಳ ಸೇವೆಯನ್ನು ಪೂರೈಸಿದ್ದು, ಪಿ.ಹೆಚ್.ಡಿ ಪಡೆದಿರುವ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಪಡೆಯಲಾಗಿದ್ದು, ಅರ್ಹ ಅಭ್ಯರ್ಥಿಗಳಿಗೆ ಪ್ರಾಧ್ಯಾಪಕರಾಗಿ ಪದೋನ್ನತಿ ನೀಡಲು ಪರಿಶೀಲಿಸಲಾಗುತ್ತಿದೆ. |
| ಇ) | ರಾಜ್ಯದ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪ್ರಾಧ್ಯಾಪಕರ ಹುದ್ದೆಯಿಂದ ಪ್ರಾಂಶುಪಾಲರ ಹುದ್ದೆಗೆ ಹಲವು ವರ್ಷಗಳಿಂದ ಬಡ್ತಿ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ವಿಳಂಬಕ್ಕೆ ಕಾರಣವೇನು; ಮತ್ತು ಯಾವಾಗ ನೀಡಲಾಗುವುದು? ಸಂಪೂರ್ಣ ವಿವರ ನೀಡುವುದು) | ಬಂದಿದೆ.<br>ಯು.ಜಿ.ಸಿ ನಿಯಮಾವಳಿಗಳ ಅನುಸಾರ ಪ್ರಾಂಶುಪಾಲರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಬೇಕಾಗಿರುತ್ತದೆ. ನೇರ ನೇಮಕಾತಿಗಾಗಿ ಸೂಕ್ತ ಮಾರ್ಗಸೂಚಿಗಳನ್ನು ಜಾರಿಗೆ ತರದೆ ಇದ್ದುದ್ದರಿಂದ ಇದುವರೆಗೆ ಪ್ರಾಂಶುಪಾಲರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಸಾಧ್ಯವಾಗಿರುವುದಿಲ್ಲ.<br>ದಿನಾಂಕ:20-8-2018ರ ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 121 ಡಿಸಿಇ 2018ರಲ್ಲಿ ಕರಡು ನೇರ ನೇಮಕಾತಿ ನಿಯಮಗಳನ್ನು ಹೊರಡಿಸಿದ್ದು, ನಿಯಮಗಳನ್ನು ಅಂತಿಮಗೊಳಿಸಲಾಗುತ್ತಿದೆ. ಅದರಂತೆ ಕ್ರಮವಹಿಸಿ ಪ್ರಾಂಶುಪಾಲರ ಹುದ್ದೆಗಳನ್ನು ಭರ್ತಿ ಮಾಡಲಾಗುವುದು. |

(ಜಿ.ಟಿ ದೇವೇಗೌಡ)
ಉನ್ನತ ಶಿಕ್ಷಣ ಸಚಿವರು

ಇಡಿ 333 ಡಿಸಿಇ 2018